RNU AIR DHARWAD

SEPTEMBER 02, 2026

**AKASHAVANI - DHARWAD**

**PRADESH SAMACHARA (KANNADA) 07.05 A.M.**

<><><>

ಮುಖ್ಯಾಂಶಗಳು:

- ಬರ ಪ್ರದೇಶಗಳ ಎರಡನೇ ಪಟ್ಟಿಯನ್ನು ಶೀಘ್ರವೇ ಘೋಷಣೆ ಮಾಡಲಾಗುವುದು –ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.

- ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೀ 'ಪ್ರಜಾಸೇವೆ' ಅಭಿಯಾನಕ್ಕೆ ಇದೇ 5 ರಂದು ವಿಜಯನಗರ ಜಿಲ್ಲೆಯ ಕೂಡ್ಲಿಗಿಯಲ್ಲಿ ಅಧಿಕೃತ ಚಾಲನೆ.

- ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ 2026ನೆಯ ಸಾಲಿನ 'ವಾರ್ಷಿಕ ಗೌರವ ಪ್ರಶಸ್ತಿ' ಪ್ರಕಟ.

- ಇಂದು, ವಿಶ್ವ ತೆಂಗು ದಿನ. "ಅನಿಶ್ಚಿತತೆಯ ಕಾಲದಲ್ಲಿ ತೆಂಗು: ಆಹಾರ, ಶಕ್ತಿ ಮತ್ತು ಜೀವನೋಪಾಯದ ಭದ್ರತೆ" ಈ ವರ್ಷದ ಘೋಷವಾಕ್ಯ.

ವಾರ್ತೆಗಳ ವಿವರ...

<><><>

ಸರ್ಕಾರ ಮಾರ್ಗಸೂಚಿ ಅನುಸಾರ ಬರ ಪ್ರದೇಶ ಘೋಷಣೆ ಮಾಡಬೇಕು. ಅದರನ್ವಯ ಅಧ್ಯಯನ ಮಾಡಿ ಎರಡನೇ ಪಟ್ಟಿಯನ್ನು ಶೀಘ್ರವೇ ಘೋಷಣೆ ಮಾಡಲಾಗುವುದೆಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಿಳಿಸಿದ್ದಾರೆ. ಗದಗದಲ್ಲಿ ಜಿಲ್ಲೆಯ ಬರ ಪರಿಸ್ಥಿತಿ ಕುರಿತು ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಗದಗ ಜಿಲ್ಲೆಯ ಒಂದು ತಾಲೂಕನ್ನು ಮಾತ್ರ ಬರಪೀಡಿತ ತಾಲೂಕು ಎಂದು ಘೋಷಿಸಿರುವ ಹಿನ್ನೆಲೆ; ಜಿಲ್ಲೆಗೆ ಆಗಮಿಸಿ ಬರ ಪರಿಸ್ಥಿತಿಯನ್ನು ಪರಿಶೀಲಿಸಲಾಗಿದೆ.

ಜಿಲ್ಲೆಯ ಬಹುತೇಕ ಪ್ರದೇಶಗಳಲ್ಲಿ ಬೆಳೆ ಪರಿಸ್ಥಿತಿ ತೀವ್ರವಾಗಿ ಹದಗೆಟ್ಟಿದ್ದು, ಶೇಕಡ.95 ರಷ್ಟು ಪ್ರದೇಶದಲ್ಲಿ ಹಸಿರು ಕಾಣದಂತಹ ಪರಿಸ್ಥಿತಿ ಕಂಡುಬಂದಿದೆ. ಆದ್ದರಿಂದ ಮುಂದಿನ ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿ ಗದಗ ಜಿಲ್ಲೆಯ ಸಾಧ್ಯವಾದಷ್ಟು ಹೆಚ್ಚಿನ ತಾಲೂಕುಗಳನ್ನು ಸೇರ್ಪಡೆಗೊಳಿಸಿ ರೈತರಿಗೆ ನ್ಯಾಯ ಒದಗಿಸಲು ಸರ್ಕಾರ ಪ್ರಯತ್ನಿಸಲಿದೆ ಎಂದು ತಿಳಿಸಿದರು. ರಾಜ್ಯ ಸರ್ಕಾರದಿಂದ 'ತೇಗದ ಸಿರಿ' ಯೋಜನೆಯನ್ನು ಜಾರಿಗೆ ತರಲಾಗುತ್ತಿದೆ. ರಸ್ತೆ ಬದಿಗಳಲ್ಲಿ ಹಾಗೂ ರೈತರ ಜಮೀನುಗಳಲ್ಲಿ ತೇಗದ ಮರಗಳನ್ನು ಬೆಳೆಸುವ ಮೂಲಕ ಮುಂದಿನ ದಿನಗಳಲ್ಲಿ ರೈತರಿಗೆ ಹೆಚ್ಚುವರಿ ಆದಾಯ ದೊರೆಯುವಂತೆ ಮಾಡುವ ಉದ್ದೇಶವನ್ನು ಯೋಜನೆ ಹೊಂದಿದೆ ಎಂದು ಮುಖ್ಯಮಂತ್ರಿಯವರು ವಿವರಿಸಿದರು.

<><><>

**ಮೈಕ್ರೋ ಫೈನಾನ್ಸ್‌ಗಳ ಹಾವಳಿ ತಡೆಯಲು ಈಗಾಗಲೇ ಕಾನೂನು ರೂಪಿಸಲಾಗಿದೆ** ಎಂದು ಕಂದಾಯ ಖಾತೆ ಸಚಿವ ಡಾಕ್ಟರ್ ಜಿ.ಪರಮೇಶ್ವರ ಹೇಳಿದ್ದಾರೆ. ಮೈಸೂರು ಜಿಲ್ಲೆಯ ವಿವಿಧ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ರೈತರ ಸಮಸ್ಯೆಗಳನ್ನು ಆಲಿಸಿ, ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರೈತರಿಗೆ ಯಾವುದೇ ರೀತಿಯ ಒತ್ತಡ ಅಥವಾ ಕಿರುಕುಳ ನೀಡಬಾರದು ಎಂದು ಸ್ಪಷ್ಟ ಸೂಚನೆ ನೀಡಲಾಗಿದೆ. ಈ ಸೂಚನೆಗಳನ್ನು ಉಲ್ಲಂಘಿಸಿ ರೈತರಿಗೆ ತೊಂದರೆ ನೀಡಿದರೆ, ಸಂಬಂಧಪಟ್ಟವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು. ಜೋಳಕ್ಕೆ ಬಿಳಿಸುಳಿ ರೋಗ ಬಂದಿದೆ. ಈ ರೋಗಕ್ಕೆ ವಿಮಾ ಪರಿಹಾರ ದೊರಕುವುದಿಲ್ಲ. ಹಾಗಾಗಿ ವಿಮಾ ಕಂಪನಿಯವರೊಂದಿಗೆ ಮಾತನಾಡಿ ಈ ಬಗ್ಗೆ ಕ್ರಮ ಕೈಗೊಳ್ಳುವ ಪ್ರಯತ್ನ ಮಾಡಲಾಗುವುದು. ಎಂದು ಹೇಳಿದರು. ಮೋಡ ಬಿತ್ತನೆ ಮಾಡಲು ಆದೇಶ ಕೊಡಲಾಗಿದೆ. ತಾಂತ್ರಿಕ ವರದಿಯ ಪ್ರಕಾರ ಹೆಚ್ಚು ಮಳೆ ಬರುವುದಿಲ್ಲ. ಜೊತೆಗೆ ಅದು ಬೆಳೆಗಳಿಗೆ ಸಾಕಾಗುತ್ತದೆ ಎಂದು ಹೇಳಿದ್ದಾರೆ. ಹೀಗಾಗಿ ಇದನ್ನು ನಾವೆಲ್ಲರೂ ಒಪ್ಪಿಕೊಂಡಿದ್ದೇವೆ ಎಂದರು.

<><><>

**ಯಾದಗಿರಿ ಜಿಲ್ಲೆಯ ಐದು ತಾಲೂಕುಗಳನ್ನು ಬರಪೀಡಿತ ಪ್ರದೇಶಗಳ ಪಟ್ಟಿಗೆ** ಸೇರ್ಪಡೆಗೊಳಿಸುವಲ್ಲಿ ಸರ್ಕಾರ ಹಾಗೂ ಜಿಲ್ಲಾಡಳಿತ ವಿಫಲವಾಗಿದೆ ಎಂದು ಆರೋಪಿಸಿ, ಇದೇ 7ರಂದು ಯಾದಗಿರಿ ಜಿಲ್ಲಾ ಕೇಂದ್ರ ಬಂದ್‌ಗೆ ಕರೆ ನೀಡಲಾಗಿದೆ ಎಂದು ಸರ್ವ ಸಂಘಟನೆಗಳ ಹೋರಾಟ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ರಾಮಸಮುದ್ರ ತಿಳಿಸಿದ್ದಾರೆ. ಯಾದಗಿರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರ ರಾಜ್ಯದ ಹಲವು ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಿದ್ದರೂ, ಯಾದಗಿರಿ ಜಿಲ್ಲೆಯಲ್ಲಿ ಶಹಾಪುರ ತಾಲೂಕನ್ನು ಮಾತ್ರ ಪಟ್ಟಿಗೆ ಸೇರಿಸಿದೆ. ಯಾದಗಿರಿ, ಗುರುಮಠಕಲ್, ವಡಗೇರಾ, ಸುರಪುರ ಹಾಗೂ ಹುಣಸಗಿ ತಾಲೂಕುಗಳನ್ನು ಕೈಬಿಟ್ಟಿರುವುದು ಜಿಲ್ಲೆಯ ರೈತರಿಗೆ ಮಾಡಿದ ಅನ್ಯಾಯವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

<><><>

**ಚಿತ್ರದುರ್ಗ ಜಿಲ್ಲೆಯಲ್ಲಿ ಬಿಟ್ಟುಹೋಗಿರುವ ಚಿತ್ರದುರ್ಗ, ಹೊಳಲ್ಕೆರೆ ಹಾಗೂ** ಮೊಳಕಾಲ್ಮೂರು ತಾಲೂಕುಗಳು ಶೀಘ್ರದಲ್ಲೇ ಕೇಂದ್ರ ಸರ್ಕಾರದ ನಿಯಮಾವಳಿಗಳ ಪ್ರಕಾರ ಬರಪೀಡಿತ ಪಟ್ಟಿಗೆ ಸೇರ್ಪಡೆಯಾಗಲಿವೆ ಎಂದು

ಪರಿಶಿಷ್ಟ ವರ್ಗಗಳ ಕಲ್ಯಾಣ ಖಾತೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಟಿ. ರಘುಮೂರ್ತಿ ಸ್ಪಷ್ಟಪಡಿಸಿದ್ದಾರೆ. ಚಿತ್ರದುರ್ಗದಲ್ಲಿ ತಮ್ಮನ್ನು ಭೇಟಿಯಾದ ರೈತ ಮುಖಂಡರೊಂದಿಗೆ ಚರ್ಚಿಸಿದ ಅವರು, ಬರ ಘೋಷಣೆಯು ಸಂಪೂರ್ಣವಾಗಿ ಕೇಂದ್ರ ಸರ್ಕಾರದ 'ಬರ ನಿರ್ವಹಣೆ ಕೈಪಿಡಿ 2020 ರ ಮಾರ್ಗದರ್ಶಿ ಸೂತ್ರಗಳ ಮೇಲೆ ಆಧಾರಿತವಾಗಿದೆ ಎಂದರು. ಶೇಕಡಾ 60ಕ್ಕಿಂತ ಹೆಚ್ಚು ಮಳೆ ಕೊರತೆ ಹಾಗೂ ಸತತ ಮೂರು ವಾರಗಳ ಶುಷ್ಕ ವಾತಾವರಣ ಬರ ಘೋಷಣೆಯ ಮುಖ್ಯ ಮಾನದಂಡವಾಗಿದೆ ಎಂದು ತಿಳಿಸಿದರು.

<><><>

**ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಪ್ರಜಾಸೇವೆ' ಅಭಿಯಾನಕ್ಕೆ ಇದೇ** 5 ರಂದು ವಿಜಯನಗರ ಜಿಲ್ಲೆಯ ಕೂಡ್ಲಿಗಿಯಲ್ಲಿ ಅಧಿಕೃತವಾಗಿ ಚಾಲನೆ ದೊರೆಯಲಿದೆ ಎಂದು ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ. ಎಸ್. ಬಸವಂತಪ್ಪ ತಿಳಿಸಿದ್ದಾರೆ. ಕೂಡ್ಲಿಗಿಯಲ್ಲಿ ನಡೆದ ಕಾರ್ಯಕ್ರಮದ ಪೂರ್ವಸಿದ್ಧತಾ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು; ಸರ್ಕಾರವೇ ಜನರ ಮನೆ ಬಾಗಿಲಿಗೆ ಬರಲಿದ್ದು, ಪ್ರಜಾಸೇವೆಯು ಕೇವಲ ಪ್ರಚಾರಕ್ಕಾಗಿ ಮಾಡುವ ಕೆಲಸವಲ್ಲ. ಸರ್ಕಾರ ಮತ್ತು ಆಡಳಿತ ವ್ಯವಸ್ಥೆಯೇ ಜನರ ಮನೆ ಬಾಗಿಲಿಗೆ ತೆರಳಿ ಸೌಲಭ್ಯಗಳನ್ನು ಒದಗಿಸುವ ಹಾಗೂ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ವಿನೂತನ ವ್ಯವಸ್ಥೆಯಾಗಿದೆ ಎಂದರು. ಈ ಯೋಜನೆಯ ಅನುಷ್ಠಾನಕ್ಕಾಗಿ ಪ್ರಧಾನ ಕಾರ್ಯದರ್ಶಿಗಳಿಂದ ಹಿಡಿದು, ಜಿಲ್ಲಾ ಮಟ್ಟ ಹಾಗೂ ತಾಲೂಕು ಮಟ್ಟದವರೆಗೆ ಪ್ರತ್ಯೇಕ ಕಾರ್ಯವ್ಯವಸ್ಥೆ ಮತ್ತು ಸಚಿವಾಲಯವನ್ನು ರೂಪಿಸಲಾಗಿದೆ ಎಂದರು. ಕೂಡ್ಲಿಗಿಯಲ್ಲಿ ನಡೆಯುವ ಈ ಐತಿಹಾಸಿಕ ರಾಜ್ಯಮಟ್ಟದ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿಗಳಾದ ಡಿ. ಕೆ. ಶಿವಕುಮಾರ್ ಚಾಲನೆ ನೀಡುವರು, ಜೊತೆಗೆ ಕ್ಯಾಬಿನೆಟ್‌ನ ಅನೇಕ ಸಚಿವರು ಸೇರಿದಂತೆ ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದೂ ಅವರು ತಿಳಿಸಿದರು.

<><><>

**ಈಗ ಪ್ರಕಟಣೆ ಬಳಿಕ ಪ್ರದೇಶ ಸಮಾಚಾರ ಮುಂದುವರಿಯುವುದು**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ಕನ್ನಡ ಹಾಗೂ ಇತರ ಭಾಷೆಗಳ ನಡುವೆ ಭಾಷಾಂತರ ಕ್ಷೇತ್ರದಲ್ಲಿ ವಿಶೇಷ ಹಾಗೂ** ಗಣನೀಯ ಸಾಧನೆ ಮಾಡಿರುವ ವಿದ್ವಾಂಸರಿಗೆ ನೀಡಲಾಗುವ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ 2026ನೆಯ ಸಾಲಿನ 'ವಾರ್ಷಿಕ ಗೌರವ ಪ್ರಶಸ್ತಿ' ಹಾಗೂ 2025ರಲ್ಲಿ ಪ್ರಥಮಾವೃತ್ತಿಯಲ್ಲಿ ಪ್ರಕಟವಾದ ಅತ್ಯುತ್ತಮ ಅನುವಾದಿತ ಕೃತಿಗಳಿಗೆ ನೀಡಲಾಗುವ 'ಪುಸ್ತಕ ಬಹುಮಾನ'ಗಳನ್ನು ಪ್ರಾಧಿಕಾರ ಪ್ರಕಟಿಸಿದೆ. ಗೌರವ ಪ್ರಶಸ್ತಿಯು ತಲಾ

ರೂ. 50 ಸಾವಿರ ರೂಪಾಯಿ ನಗದು ಹಾಗೂ ಗೌರವ ಸನ್ಮಾನವನ್ನು ಒಳಗೊಂಡಿದ್ದು, **ಡಾ. ಸೂರ್ಯಕಾಂತ ಸುಖಿತಾಣ್ಕೆ, ಡಾ. ಮಲರ್ ವಿಳಿ ಕೆ, ಡಾ. ಬಂಜಗೆರೆ ಜಯಪ್ರಕಾಶ್, ಡಾ. ನಾಗಣ್ಣ ಸಿ, ಡಾ. ಕೇಶವ ಶರ್ಮ ಕೆ** ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ ಎಂದು ಪ್ರಾಧಿಕಾರದ ಅಧ್ಯಕ್ಷ ಡಾ. ಚನ್ನಪ್ಪ ಕಟ್ಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

**ಇಂದು, ವಿಶ್ವ ತೆಂಗು ದಿನ. “ಅನಿಶ್ಚಿತತೆಯ ಕಾಲದಲ್ಲಿ ತೆಂಗು: ಆಹಾರ, ಶಕ್ತಿ** ಮತ್ತು ಜೀವನೋಪಾಯದ ಭದ್ರತೆ” ಇದು ಈ ವರ್ಷದ ಘೋಷವಾಕ್ಯವಾಗಿದೆ. ನೀರು, ಎಳನೀರು, ತಿರುಳು, ಎಣ್ಣೆ, ನಾರು, ಚಿಪ್ಪು, ಎಲೆ ಹೀಗೆ ಆಹಾರದಿಂದ ಹಿಡಿದು ಇಂಧನ, ಕೈಗಾರಿಕೆ ಮತ್ತು ಜೀವನೋಪಾಯದವರೆಗೆ ತೆಂಗು ತನ್ನದೇ ಆದ ವಿಶಿಷ್ಟ ಸ್ಥಾನವನ್ನು ಹೊಂದಿದೆ. ಭಾರತದಲ್ಲಿ ತೆಂಗು ಕೃಷಿ ಕೇವಲ ಕೃಷಿಯಲ್ಲ; ಅದು ಆರ್ಥಿಕತೆ, ಆಹಾರ ಪದ್ಧತಿ, ಸಂಸ್ಕೃತಿ ಮತ್ತು ಗ್ರಾಮೀಣ ಬದುಕಿನ ಭಾಗವಾಗಿದೆ. ಭಾರತದ ತೆಂಗಿನ ವಲಯದ ಮೇಲೆ ಸುಮಾರು 3 ಕೋಟಿ ಜನರು, ಅವರಲ್ಲಿ ಸುಮಾರು 1 ಕೋಟಿ ರೈತರು, ನೇರವಾಗಿ ಅಥವಾ ಪರೋಕ್ಷವಾಗಿ ಅವಲಂಬಿತರಾಗಿದ್ದಾರೆ. ವಿಶ್ವ ತೆಂಗು ದಿನಾಚರಣೆ ಕುರಿತು ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ **Tengin** (ಟೆಂಗ್ಗಿನ) ನವೋದ್ಯಮಿ, ಹಾಸನ ಜಿಲ್ಲೆ, ಅರಸೀಕೆರೆ ತಾಲೂಕಿನ, ಮಧು ಕರಗುಂದ

<><><>

**ಮಧು ಕರಗುಂದ ಧ್ವನಿ 47 ಸೆಕೆಂದುಗಳು**

<><><>

**ಬೆಂಗಳೂರು ಬಯೋ ಇನ್ನೋವೇಶನ್ ಸೆಂಟರ್ ಹಾಗೂ ಕಲಬುರಗಿ ಕೃಷಿ ಇಲಾಖೆ** ಸಹಯೋಗದಲ್ಲಿ, ಸ್ಥಳೀಯವಾಗಿ ಬೆಳೆಯುವ ತೊಗರಿಬೇಳೆ, ಉದ್ದಿನಬೇಳೆ, ಹೆಸರುಬೇಳೆ ಮತ್ತು ಕಡಲೆಬೇಳೆ ಬಳಸಿ 6 ಬಗೆಯ ‘ರೆಡಿ ಟು ಈಟ್ ಎನರ್ಜಿ ಬಾರ್‌ಗಳನ್ನು’ ತಯಾರಿಸಲಾಗಿದ್ದು, ಪ್ರಾಯೋಗಿಕವಾಗಿ ಪರಿಚಯಿಸಲಾಗುತ್ತಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕಲಬುರಗಿಯ ಕಾಳುಗಳನ್ನು ಕಚ್ಚಾ ಉತ್ಪನ್ನದಿಂದ ಮೌಲ್ಯವರ್ಧಿತ ಹಾಗೂ ಬ್ರಾಂಡೆಡ್ ಉತ್ಪನ್ನಗಳಾಗಿ ಪರಿವರ್ತಿಸುವತ್ತ ಇದು ಮಹತ್ವದ ಹೆಜ್ಜೆಯಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಅವರು ಈ ವಿಷಯ ತಿಳಿಸಿದ್ದಾರೆ. ಇದು ರೈತರಿಗೆ ತಮ್ಮ ಉತ್ಪನ್ನಗಳಿಗೆ ಹೆಚ್ಚಿನ ಮೌಲ್ಯ ಪಡೆಯಲು, FPOಗಳು, SHG ಗಳು ಮತ್ತು MSME ಗಳಿಗೆ ಹೊಸ ಉದ್ಯಮ ತೆರೆಯಲು ಮತ್ತು ಉತ್ತಮ ಪೌಷ್ಟಿಕತೆ ಹಾಗೂ ಬಲಿಷ್ಠ “ಕಲಬುರಗಿ ಪಲ್ಸ್” ಬ್ರ್ಯಾಂಡ್ ರೂಪುಗೊಳ್ಳಲು ಅವಕಾಶ ಒದಗಿಸಿದೆ. ಮುಂದಿನ ಹಂತದಲ್ಲಿ ಸ್ಥಳೀಯ ಉತ್ಪಾದನೆಗಾಗಿ ಪರವಾನಗಿ ಹಾಗೂ ತಂತ್ರಜ್ಞಾನ ವರ್ಗಾವಣೆ ನಡೆಸಲಾಗುವುದು ಎಂದು ಸಾಮಾಜಿಕ ಮಾಧ್ಯಮ ಫೇಸ್‌ಬುಕ್ ಮೂಲಕ ಹೇಳಿದ್ದಾರೆ.

<><><>

**ಯಾವುದೇ ಮಧ್ಯವರ್ತಿಗಳ ಹಾವಳಿ ಇರದೇ, ರೈತರಿಗೆ ಸರ್ಕಾರದಿಂದ ನೀಡುತ್ತಿರುವ** ಹಲವು ಯೋಜನೆಗಳು ಸಮರ್ಪಕವಾಗಿ ಅನುಷ್ಠಾನ ಆಗಬೇಕು ಹಾಗೂ ರೈತರಿಂದ ಯಾವುದೇ ದೂರು ಬಂದರೂ, ಸಂಬಂಧಿತ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದೆಂದು ಎಂದು ಕೃಷಿ ಖಾತೆ ಸಚಿವ ಪಿ. ಎಂ. ನರೇಂದ್ರ ಸ್ವಾಮಿ ಎಚ್ಚರಿಕೆ ನೀಡಿದ್ದಾರೆ. ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯದಲ್ಲಿ ಕೃಷಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

<><><>

ಮುಳುಗಡೆಯಿಂದ ಬಾಧಿತವಾದ ಬಾಗಲಕೋಟೆ ಜಿಲ್ಲೆಯ ಇದ್ದಲಗಿ ಗ್ರಾಮವನ್ನು ಶೀಘ್ರದಲ್ಲಿಯೇ ಸಂಪೂರ್ಣವಾಗಿ ಸ್ಥಳಾಂತರಿಸಲು ಕ್ರಮವಹಿಸಲಾಗುವದೆಂದು ಸಣ್ಣ ಕೈಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ವಿಜಯಾನಂದ ಕಾಶಪ್ಪನವರ ತಿಳಿಸಿದ್ದಾರೆ. ಹುನಗುಂದ ತಾಲೂಕಿನ ಇದ್ದಲಗಿ ಗ್ರಾಮದಲ್ಲಿ ನಡೆದ ಆಕಸ್ಮಿಕ ಅಗ್ನಿ ಅವಘಡ ಸ್ಥಳಕ್ಕೆ ಭೇಟಿ ನೀಡಿ, ಉಂಟಾದ ಹಾನಿಯನ್ನು ಪರಿಶೀಲಿಸಿ, ಬಾಧಿತ ಕುಟುಂಬಗಳಿಗೆ ಸಾಂತ್ವನ ಹೇಳಿ ಅವರು ಮಾತನಾಡಿದರು.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:**

- **ಬರ ಪ್ರದೇಶಗಳ ಎರಡನೇ ಪಟ್ಟಿಯನ್ನು ಶೀಘ್ರವೇ ಘೋಷಣೆ ಮಾಡಲಾಗುವುದು –ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.**

- **ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೀ 'ಪ್ರಜಾಸೇವೆ' ಅಭಿಯಾನಕ್ಕೆ ಇದೇ 5 ರಂದು ವಿಜಯನಗರ ಜಿಲ್ಲೆಯ ಕೂಡ್ಲಿಗಿಯಲ್ಲಿ ಅಧಿಕೃತ ಚಾಲನೆ.**

- **ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ 2026ನೆಯ ಸಾಲಿನ 'ವಾರ್ಷಿಕ ಗೌರವ ಪ್ರಶಸ್ತಿ' ಪ್ರಕಟ.**

- **ಇಂದು, ವಿಶ್ವ ತೆಂಗು ದಿನ. "ಅನಿಶ್ಚಿತತೆಯ ಕಾಲದಲ್ಲಿ ತೆಂಗು: ಆಹಾರ, ಶಕ್ತಿ ಮತ್ತು ಜೀವನೋಪಾಯದ ಭದ್ರತೆ" ಈ ವರ್ಷದ ಘೋಷವಾಕ್ಯ.**

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು. ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ

<><><><><><><><><><>